# ವ್ಯಸನಮುಕ್ತ ದಿನಾಚರಣೆ ಕಾರ್ಯಕ್ರಮ

ಸಪ್ಟಂಬರ್–೫.೨೦೨೩ ರಂದು ಜರುಗಿದ ವ್ಯಸನಮುಕ್ತ ದಿನಾಚರಣೆ ಕಾರ್ಯಕ್ರಮದಲ್ಲಿ ನಮ್ಮ ವಿಭಾಗದ ಮುಖ್ಯಸ್ಥರಾದ ಡಾ.ಗೀತಮ್ಮ ಮೇಡಂ, ಡಾ. ಜನಾರ್ಧನ್ ಸರ್, ಡಾ.ಎಚ್.ಡಿ. ಪ್ರಶಾಂತ್ ಸರ್ ಹಾಗೂ ವಿಭಾಗದ ಎಲ್ಲಾ ಸ್ನೇಹಿತರು ಭಾಗಿಯಾಗಿದ್ದರು

ಶಿವರಾಜ, ನಳಿನಿ, ಮಂಜಣ್ಣ, ಮಾಳಿಗಿ ತಿಮ್ಮಣ್ಣ, ಡಾ.ಗೀತಮ್ಮ ಮೇಡಂ, ಡಾ. ಜನಾರ್ದನ ಸರ್, ಡಾ.ಎಚ್.ಡಿ. ಪ್ರಶಾಂತ್ ಸರ್ ವ್ಯಸನಮುಕ್ತ ದಿನಾಚರಣೆ ಕುರಿತು ಮಾತನಾಡಿದರು

ಶಿವರಾಜ ರಾಮಚಂದ್ರಗೌಡ

**ಅಭಿವೃದ್ದಿ ಅಧ್ಯಾಯನ ವಿಭಾಗ**

**ಅನಿಸಿಕೆ**

ಡಾ. ಮಹಾಂತ ಶಿವಯೋಗಿಗಳ ಜನ್ಮ ದಿನವನ್ನು ಕರ್ನಾಟಕದಲ್ಲಿ **'ವ್ಯಸನ ಮುಕ್ತ ದಿನಾಚರಣೆ'ಯಾಗಿ** ಆಚರಣೆ ಮಾಡಲಾಗುತ್ತದೆ. ಆಗಸ್ಟ್ ೧ರಂದು ನಡೆಯುವ 'ವ್ಯಸನ ಮುಕ್ತ ದಿನಾಚರಣೆ' ಹಿನ್ನಲೆಯಲ್ಲಿ ನಾವು ವಿಭಾಗದಲ್ಲಿ ಜಾಗೃತಿ ಕಾರ್ಯಕ್ರಮ ಹಮ್ಮಿಕೊಂಡಿದ್ದೆವೆ.

ಪ್ರಮುಖವಾಗಿ ಡಾ.ಮಹಾಂತ ಶಿವಯೋಗಿ ಸ್ವಾಮೀಜಿಯವರು 'ವ್ಯಸನ ಮುಕ್ತ ಸಮಾಜ' ನಿರ್ಮಾಣಕ್ಕೆ ೧೯೭೫ರಿಂದ ಕೈಗೊಂಡ ಮಹಾಂತ ಜೋಳಿಗೆ ಕಾರ್ಯಕ್ರಮ ಅತ್ಯಂತ ವಿಶಿಷ್ಟವಾದುದು, ಕುಡಿತದ ಚಟದಿಂದ ಪ.ಜಾತಿಯ ಯುವಕನೊಬ್ಬ ನಿಧನದ ಸುದ್ದಿ ಕೇಳಿ ಅವನ ಕೇರಿಗೆ ಸಾಂತ್ವನ ಹೇಳಲು ತೆರಳಿದ್ದ ಸ್ವಾಮಿಗಳಿಗೆ ಆತನ ಪತ್ನಿ ಮತ್ತು ಮಕ್ಕಳು ಉಪವಾಸದಿಂದ ದು:ಖಿಸುವುದನ್ನು ಕಂಡರು. ಇಂತಹ ಸಾವಿರಾರು ಕುಟುಂಬಗಳ ಕುಡಿತ ಮತ್ತು ಇತರೆ ದುಶ್ಚಟಗಳಿಂದ ಹಾಳಾಗಿರುವುದನ್ನು ಅರಿತು, ಇಂತಹ ದುಶ್ಚಟಗಳಿಗೆ ಒಳಗಾಗಿರುವವನ್ನು ಮುಕ್ತಿಗೊಳಿಸುವ ಉದ್ದೇಶದಿಂದ ಮಹಾಂತ ಜೋಳಿಗೆ ಯೋಜನೆ ಆರಂಭಿಸಿದರು. ಹಾಸನ ಅಕ್ಟೋಬರ್ ೨೬ ರಿಂದ ಫಲಪುಷ್ಪ ಪ್ರದರ್ಶನ, ವಿಶೇಷತೆಗಳು ಬಟ್ಟೆಯ ಚೀಲದ ಜೋಳಿಗೆ ಹಿಡಿದು ಕುಡಿತದ ಚಟದಿಂದ ನಿಧನನಾದ ಪ.ಜಾತಿಯ ಯುವಕನ ಕೇರಿಗೆ ಮೊದಲಿಗೆ ತೆರಳಿದ ಸ್ವಾಮೀಜಿಗಳು, ಅಲ್ಲಿನ ಗುಡಿಸಲು ಮನೆಗಳಿಗೆ ತೆರಳಿ ಮದ್ಯಪಾನ, ತಂಬಾಕು ಸೇರಿದಂತೆ ಎಲ್ಲಾ ರೀತಿಯ ದುಶ್ಚಟಗಳ ಬಗ್ಗೆ ಅಲ್ಲಿನ ಜನತೆಗೆ ಮನ ಮುಟ್ಟುವಂತೆ ತಿಳುವಳಿಕೆ ನೀಡಿ ಮನಪರಿವರ್ತನೆ ಮಾಡಿದರು. ದುರ್ವಸನಿಗಳು ತಮ್ಮ ಎಲ್ಲಾ ದುಶ್ಚಟಗಳ ವಸ್ತುಗಳನ್ನು ಸ್ವಾಮೀಜಿ ಅವರ ಜೋಳಿಗೆಗೆ ಹಾಕಿ, ಇನ್ನೆಂದೂ ಅವುಗಳನ್ನು ಬಳಸುವುದಿಲ್ಲ ಎಂದು ಪ್ರಮಾಣ ಮಾಡಿದರು.

ಜಾತಿ, ಮತ, ಪಂಗಡ, ಧರ್ಮ, ಭಾಷೆ, ದೇಶವೆನ್ನದೇ ಇಡೀ ೪೨ ವರ್ಷಗಳ ಕಾಲ ದೇಶದಲ್ಲಿ ಮಾತ್ರವಲ್ಲದೇ ಇಂಗ್ಲೆಂಡ್ ಸೇರಿದಂತೆ ವಿದೇಶದಲ್ಲೂ ತಮ್ಮ ಮಹಾಂತ ಜೋಳಿಗೆ ಹಿಡಿದು ಜನರಲ್ಲಿನ ದುಶ್ಚಟಗಳ ಭಿಕ್ಷೆ ಬೇಡಿದರು. ಮಹಾಂತ ಶಿವಯೋಗಿಗಳು ವ್ಯಸನ ಮುಕ್ತ ವ್ಯಕ್ತಿ, ಕುಟುಂಬ, ಸಮಾಜ, ಗ್ರಾಮಗಳ ನಿರ್ಮಾಣ ಮಾಡುವ ಜೊತೆಗೆ ತಮ್ಮ ಜೋಳಿಗೆ ಕಾರ್ಯಕ್ರಮದಲ್ಲಿ ನಾಡಿನ ಪ್ರಖ್ಯಾತ ವೈದ್ಯರು, ಸಮಾಜ ವಿಜ್ಞಾನಿಗಳು,ಸಾಹಿತಿಗಳು, ಸಮಾಜ ಕಳಕಳಿಯ ಕವಿಗಳು, ಧರ್ಮ ಗುರುಗಳನ್ನು ಆಹ್ವಾನಿಸಿ ಅವರಿಂದ ಉಪನ್ಯಾಸಗಳನ್ನು ಮಾಡಿಸುವ ಮೂಲಕ ವ್ಯಸನಗಳ

ಮನಪರಿವರ್ತನೆ ಮಾಡುವುದುರ ಜೊತೆಗೆ ಮಕ್ಕಳು, ವಿದ್ಯಾರ್ಥಿಗಳು, ಯುವ ಜನಾಂಗ ಇಂತಹ ಚಟಗಳಿಗೆ ಬಲಿಯಾದಂತೆ ಅರಿವು ಮೂಡಿಸುತ್ತಿದ್ದರು. ಇದರಿಂದಾಗಿ ಲಕ್ಷಾಂತರ ಜನರು ವ್ಯಸನಗಳಿಂದ ಮುಕ್ತರಾಗಿ ಅವರ ಕುಟುಂಬಗಳು ನೆಮ್ಮದಿಯ ಜೀವನ ಸಾಗಿಸುತ್ತಿವೆ. ಡಾ.ಮಹಾಂತ ಶಿವಯೋಗಿ ಅವರ ಜನ್ಮದಿನ ಆಗಸ್ಟ್ ೧. ರಾಜ್ಯ ಸರ್ಕಾರವು ರಾಜ್ಯಾದ್ಯಂತ ವ್ಯಸನ ಮುಕ್ತ ದಿನವನ್ನಾಗಿ ಆಚರಿಸಲು ನಿರ್ಧರಿಸಿ ಆದೇಶಿಸಿದ್ದು, ಕರ್ನಾಟಕ ರಾಜ್ಯವನ್ನು ವ್ಯಸನ ಮುಕ್ತ ರಾಜ್ಯವಾಗಿ ಮಾಡಲು ಸಾರ್ವಜನಿಕರು ಹಾಗೂ ಯುವಜನತೆ ವ್ಯಸನಗಳಿಂದ ಮುಕ್ತವಾಗಲು ಈ ದಿನಾಚರಣೆಯು ಪ್ರೇರಣೆಯಾಗಲಿದೆ. ಜಿಲ್ಲಾ ಮಟ್ಟದ ಹಾಗೂ ತಾಲ್ಲೂಕು ಮಟ್ಟದ ಎಲ್ಲಾ ಇಲಾಖೆಗಳು ಸಮನ್ವಯದೊಂದಿಗೆ ಶಾಲಾ ಕಾಲೇಜು ವಿದ್ಯಾರ್ಥಿಗಳು ಸಾರ್ವಜನಿಕರನ್ನು ಒಗ್ಗೂಡಿಸಿ ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಕೈ ಜೋಡಿಸುವ ವಚನ ಪ್ರಮಾಣ ಹಾಗೂ ಜಯಂತಿ ಕಾರ್ಯಕ್ರಮ ಜಾಥಾ ಆಯೋಜಿಸಿ ಶ್ರೀಗಳ ಜಯಂತಿ ಆಚರಿಸಲಾಗುತ್ತಿದೆ.

ಮದ್ಯಪಾನ ಮುಕ್ತ ದೇಶವನ್ನು ಮಾಡುವ ಸಲುವಾಗಿ ಸಹಸ್ರಾರು ಜನರು ಪಾಲ್ಗೊಂಡಿದ್ದರು. ಕೂಡಲಸಂಗಮ ಲಿಂಗಾಯತ ಪಂಚಮಸಾಲಿ ಪೀಠದ ಜಗದ್ಗುರು ಬಸವಜಯ ಮೃತ್ಯುಂಜಯ ಸ್ವಾಮೀಜಿಯವರು ಸಹ ಈ ಮದ್ಯಪಾನದ ವಿರುದ್ಧ ಬಹಳ ಕಟುವಾಗಿ ನುಡಿದಿದ್ದರು. ಜನರನ್ನು ಕಣ್ಣೀರಿನಲ್ಲಿಟ್ಟು ಅರ್ಥ ವ್ಯವಸ್ಥೆ ಸುಧಾರಣೆ ಮಾಡುವುದು ರಾಜ್ಯದ ಅಭಿವೃದ್ಧಿಯಲ್ಲ. ಆರ್ಥಿಕ ಹೊರೆಯಾದರೂ ಜನರ ನೆಮ್ಮದಿ ನಮಗೆ ಮುಖ್ಯ. ಜನರ ಸುಖ, ಶಾಂತಿಗಾಗಿ ಕರ್ನಾಟಕದಲ್ಲಿ ಮದ್ಯಪಾನ ನಿಷೇಧಕ್ಕೆ ಮುಖ್ಯಮಂತ್ರಿ ಬಿ.ಎಸ್ ಯಡಿಯೂರಪ್ಪ ಮಠಾಧೀಶರ, ಚಿಂತಕರ, ಹೋರಾಟಗಾರರ, ಮಹಿಳಾ ಸಂಘಟನೆಗಳ ಸಭೆಯನ್ನು ಕೂಡಲೇ ಕರೆದು ಮದ್ಯ ನಿಷೇಧವನ್ನು ಆರ್ಥಿಕ ತೊಂದರೆ ಇಲ್ಲದೆ ನಿಷೇಧಿಸುವ ಹೊಸ ನೀತಿಯನ್ನು ಜಾರಿಗೆ ತರಬೇಕು ಅಂದು ಆಗ್ರಹಿಸಿದಲ್ಲದೆ, ಮದ್ಯಪಾನದಿಂದಲೇ ಇಂದು ಅಧಿಕ ಅತ್ಯಾಚಾರ, ಅಪರಾಧ, ಅಪಘಾತವಾಗುತ್ತಿವೆ. ಸರ್ಕಾರಕ್ಕೆ ಜನರ ನೆಮ್ಮದಿಗಿಂತ ದುಡ್ಡೆ ಮುಖ್ಯವಾಗಿದೆ. ದುಡ್ಡಿಗಾಗಿ ಸರ್ಕಾರ ಆಡಳಿತ ನಡೆಸುವುದು ಬೇಡ, ಬಿಹಾರ, ಗುಜರಾತ ರಾಜ್ಯದಲ್ಲಿ ಮದ್ಯ ನಿಷೇದ ಮಾಡಿದೆ. ಅಲ್ಲಿ ಯಾವುದೇ ಆರ್ಥಿಕ ತೊಂದರೆಯಾಗಿಲ್ಲ. ಮದ್ಯದಿಂದಲೇ ಅಧಿಕ ಹಣ ಬರುತ್ತದೆ ಎಂದು ತಪ್ಪು ಕಲ್ಪನೆಯನ್ನು ಬಿಟ್ಟು ಭ್ರಷ್ಟಾಚಾರದ ಮೂಲವನ್ನು ಸರಿಯಾಗಿ ಹತ್ತಿಕ್ಕಿದರೆ ಮದ್ಯಪಾನದಿಂದ ಬರುವ ಹಣಕ್ಕಿಂತ ೧೦೦ ಪಟ್ಟು ಹಣ ಬರುವುದು. ಇಂತಹ ಕಾರ್ಯಕ್ಕೆ ಮುಂದಾಗಿ ಮಧ್ಯಪಾನವನ್ನು ಸರ್ಕಾರ ನಿಷೇಧಿಸಬೇಕು. ಹೋರಾಟಗಾರರು ಮುಂದಿನ ಆಂದೋಲನವನ್ನು ಕನಕದಾಸರ ಕಾಗಿನೆಲೆ, ಶರೀಪರ ಶಿಶುನಾಳ, ಸಿದ್ದಗಂಗಾ ಶ್ರೀಗಳ ತುಮಕೂರಿನಲ್ಲಿ ಜಾಗೃತಿ ಮೂಡಿಸುವ ಪ್ರಯತ್ನಿಸ ಬೇಕು ಎನ್ನುವಂತಹ ಜಗದ್ಗುರು ಬಸವ ಜಯ ಮೃತ್ಯುಂಜಯ ಸ್ವಾಮೀಜಿಯವರ ಸಲಹೆ ಮದ್ಯಪಾನ ಮುಕ್ತ ದೇಶವನ್ನು ಮಾಡಲು ಹೊರಟಿರುವಂತಹ ಆಂದೋಲನದ ಕಾರ್ಯಕರ್ತರಿಗೆ ಬಹಳ ಸ್ಫೂರ್ತಿಯನ್ನು ನೀಡುತ್ತದೆ.

ಇತ್ತೀಚಿನ ದಿನಗಳಲ್ಲಿ ತೀರ್ಥಹಳ್ಳಿಯ ಗ್ರಾಮೀಣ ಪ್ರದೇಶದಲ್ಲಿ ಕಳಪೆ ಗುಣಮಟ್ಟದ ಮದ್ಯ ಮಾರಾಟವಾಗುತ್ತಿದೆ ಎಂಬ ಮಾಹಿತಿಗಳು ಕೇಳಿ ಬರುತ್ತಲಿದ್ದು. ಈ ಕಳಪೆ ಗುಣಮಟ್ಟದ ಮದ್ಯಪಾನ ಮಾಡಿದ ಅದೆಷ್ಟೋ ಮಂದಿ ಹಸುನೀಗಿರುವ ವಿಷಯಗಳು ನಾವು ದಿನನಿತ್ಯ ಪತ್ರಿಕೆಗಳಲ್ಲಿ ದೃಶ್ಯಮಾದ್ಯಮಗಳಲ್ಲಿ ನೋಡುತ್ತಿದ್ದೇವೆ. ಕಳಪೆ ಗುಣಮಟ್ಟದ ಮದ್ಯಪಾನವನ್ನು ಅಕ್ರಮವಾಗಿ ಸಾಗಿಸಲಾಗುತ್ತಿದ್ದರು ಅಬಕಾರಿ ಇಲಾಖೆಯವರು ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಸಾರ್ವಜನಿಕರು ದೂರಿಕೊಳ್ಳುತ್ತಿದ್ದಾರೆ. ಹಳ್ಳಿ ಹಳ್ಳಿಗಳಲ್ಲಿ ಮನೆ, ಅಂಗಡಿಗಳಲ್ಲಿ, ಕೆಲಸ ಮಾಡುವಲ್ಲಿಗೆ ಅಕ್ರಮ ಮದ್ಯೆಯನ್ನು ಸರಬರಾಜು ಮಾಡಲಾಗುತ್ತಿದೆ ಎಂಬ ಸುದ್ದಿಗಳು ಎಲ್ಲೆಡೆ ಹರಡುತ್ತಲಿದೆ. ಮಹತ್ಮಾ ಗಾಂಧೀಜಿಯವರು ಕೂಡ ಮದ್ಯಪಾನ ಎಲ್ಲಾ ಕೆಡುಕುಗಳ ತಾಯಿಯಾಗಿದೆ ಎಂದು ಹೇಳಿದ್ದಾರೆ. ಭಾರತಕ್ಕೆ ಸ್ವಾತಂತ್ರ ಸಿಕ್ಕಿ ಕೆಲವು ದಿನಗಳ

ಬಳಿಕ ಮಹತ್ಮಾ ಗಾಂಧೀಜಿಯವರು ಕಲ್ಕತ್ತಾದ ಬೀದಿಯಲ್ಲಿ ನಡೆದುಕೊಂಡು ಹೋಗುತ್ತಿರುವಾಗ, ಒಬ್ಬ ವ್ಯಕ್ತಿ ಬಂದು ಗಾಂಧೀಜಿಯವರೊಂದಿಗೆ ಕೇಳಿದರಂತೆ ಭಾರತಕ್ಕೆ ಸ್ವಾತಂತ್ರ ಸಿಕ್ಕಿ ಎಷ್ಟು ಸಂವೃದ್ದಿಯಾಗಿದೆಯಲ್ಲವೆ. ಅದಕ್ಕೆ ಮಹತ್ಮಾ ಗಾಂಧೀಜಿ ಭಾರತಕ್ಕೆ ಇನ್ನೂ ಸ್ವಾತಂತ್ರ ಸಿಗಲಿಲ್ಲ ಎಂದು ಹೇಳಿದರಂತೆ, ಈ ಮಾತು ಕೇಳಿ ಆ ವ್ಯಕ್ತಿಗೆ ಆಶ್ಚರ್ಯವಾಗಿ ಹೇಳಿದನಂತೆ ಇಲ್ಲ ಗಾಂಧೀಜಿ ಭಾರತಕ್ಕೆ ಸ್ವಾತಂತ್ರ ಸಿಕ್ಕಿದೆ ಈಗ ಕೆಂಪು ಕೋಟೆಯಲ್ಲಿ ಬ್ರಿಟೀಷರ ಧ್ವಜವಲ್ಲ ಬದಲಾಗಿ ಭಾರತದ ತ್ರಿವರ್ಣ ಧ್ವಜ ಹಾರಾಡುತ್ತಿದೆ ಎಂದು ಹೇಳಿದಾಗ, ಮಹತ್ಮಾ ಗಾಂಧೀಜಿ ಹೇಳಿದರಂತೆ ಎಲ್ಲಿಯವರೆಗೆ ನಮ್ಮ ದೇಶ ಮದ್ಯಪಾನ ಮುಕ್ತ ದೇಶವಾಗುವುದಿಲ್ಲವೋ ಅಲ್ಲಿಯವರೆಗೆ ನಮ್ಮ ದೇಶಕ್ಕೆ ಸ್ವಾತಂತ್ರ ಇಲ್ಲ ಎಂದೆ ಅರ್ಥ. ಮದ್ಯಪಾನ ಮುಕ್ತ ದೇಶ ಮಾಡಲು ನಮ್ಮ ಸರ್ಕಾರ ಏನೆಲ್ಲ ಕಾರ್ಯಕ್ರಮಗಳನ್ನು ಕೈಗೊಂಡಿದೆ ಎಂಬುದನ್ನು ನಾವು ಯೋಚಿಸಬೇಕಾಗಿದೆ. ಹೆಂಡ ಸರಾಯಿ ಸಹವಾಸ ಹೆಂಡತಿ ಮಕ್ಕಳ ಉಪವಾಸ ಎಂದು ಸರ್ಕಾರದ ಕಛೇರಿಗಳಲ್ಲಿ ದೊಡ್ಡದಾಗಿ ಬರಹಗಳು ಹಾಕಿದ್ದರು, ಈ ಮದ್ಯಪಾನ ಮುಕ್ತ ದೇಶ ಮಾಡಲು ನಮ್ಮ ಸರ್ಕಾರಗಳಿಗೆ ಯಾವುದೇ ಕಾಯ್ದೆ ಕಾನೂನುಗಳಿಲ್ಲ ಬದಲಾಗಿ ಸರ್ಕಾರವೇ ಹೆಂಡತಿ ಮಕ್ಕಳು ಬೀದಿ ಪಾಲಾದರೂ ಪರವಾಗಿಲ್ಲ, ಉಪವಾಸ ಕೂತರೂ ಪರವಾಗಿಲ್ಲ, ಸರ್ಕಾರವೇ ಮುಕ್ತವಾಗಿ ಮದ್ಯಪಾನವನ್ನು ಮಾರಾಟ ಮಾಡಿ ಹಣವನ್ನು ಗಳಿಸುತ್ತಿದೆ. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಬಳಿ ಮಕ್ಕಳು ಸಂದರ್ಶನ ನಡೆಸುತ್ತಿದಂತಹ ಸಂದರ್ಭದಲ್ಲಿ. ವಿದ್ಯಾರ್ಥಿಯೊಬ್ಬ ಮುಖ್ಯಮಂತ್ರಿ ಬಳಿ ರಾಜ್ಯದಲ್ಲಿ ಮದ್ಯಪಾನ ನಿಷೇಧ ಮಾಡಿ ಎಂದು ಆಗ್ರಹಿಸಿದಾಗಿ. ಆಗ ಮುಖ್ಯಮಂತ್ರಿಯಾಗಿದ್ದ ಸಿದ್ದರಾಮಯ್ಯನವರು ಹೇಳಿದರಂತೆ ಸರ್ಕಾರಕ್ಕೆ ಅತಿ ಹೆಚ್ಚು ಆದಾಯ ಬರುತ್ತಿರುವುದು ಈ ಅಬಕಾರಿ ಇಲಾಖೆಯಿಂದ ಒಂದು ವೇಳೆ ಈ ಮದ್ಯಪಾನವನ್ನು ನಿಷೇಧ ಮಾಡಿದರೆ ಸರ್ಕಾರಕ್ಕೆ ಆದಾಯದ ಕೊರತೆ ಉಂಟಾಗುತ್ತದೆ ಆದ್ದರಿಂದ ಮದ್ಯಪಾನ ನಿಷೇಧ ಮಾಡಲು ಸಾಧ್ಯವಿಲ್ಲ ಎಂದು ಹೇಳಿದ್ದರೆ, ಮಹಿಳೆಯರನ್ನು, ಮಕ್ಕಳನ್ನು ಮದ್ಯಮ ವರ್ಗದವರನ್ನು ಬೀದಿ ಪಾಲು ಮಾಡಲು ಸರ್ಕಾರವೇ ಪರೋಕ್ಷವಾಗಿ ಕಾರಣ ಎಂದೇ ಹೇಳಬಹುದಾಗಿ.

ದೇಶಾದ್ಯಂತ ಮದ್ಯಪಾನದ ವಿರುದ್ಧ ಜನಜಾಗೃತಿ ಮೂಡಿಸಿ, ನಿರಂತರ ಹೋರಾಟ ನಡೆಸೂದರಿಂದ ಮದ್ಯಪಾನ ಮುಕ್ತ ದೇಶ ಮಾಡಲು ಸಾಧ್ಯ ಎಂಬುದು ಎಲ್ಲರ ಅಭಿಲಾಷೆವಾಗಿದೆ. ಈ ಕೆಡುಕಿನ ವಿರುದ್ಧ ಎಲ್ಲರೂ ಮತ್ತೊಮ್ಮೆ ಧ್ವನಿ ಎತ್ತ ಬೇಕಾಗಿದೆ. ಮಾದಕ ವಸ್ತುಗಳ ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳ ಕುರಿತು ಅರಿವು ಮೂಡಿಸುವುದರೊಂದಿಗೆ ವ್ಯಸನ ಮುಕ್ತ ಸಮಾಜ ನಿರ್ಮಾಣ ಮಾಡುವಲ್ಲಿ ಡಾ.ಮಹಾಂತೇಶ ಶಿವಯೋಗಿಗಳು ನೀಡಿದ ಕೊಡುಗೆ ಅಪಾರ. ಶ್ರೀಗಳು ವ್ಯಸನಮುಕ್ತ ಸಮಾಜ ನಿರ್ಮಾಣಕ್ಕಾಗಿ ತಮ್ಮ ಜೀವನದುದ್ದಕ್ಕೂ ಶ್ರಮಿಸಿದ್ದಾರೆ. ಅನೇಕ ವ್ಯಸನಿಗಳು ಕುಡಿತದ ಚಟದಿಂದ ಹೊರಬರುವಂತೆ ಮಾಡಿದ್ದಾರೆ. ನಿರಂತರ ಅನ್ನ ದಾಸೋಹ, ವಚನ ಮಾಂಗಲ್ಯ, ದೇವದಾಸಿ ವಿಮೋಚನಾ ಸಂಸ್ಥೆ, ದೇವದಾಸಿಯರ ಮಕ್ಕಳಿಗೆ ಟ್ರಸ್ಟ್ ಸ್ಥಾಪನೆ, ನಿರುದ್ಯೋಗಿಗಳಿಗೆ ಮತ್ತು ವಿಧವೆಯರಿಗೆ ಕಾಯಕ ಸಂಜೀವಿನಿ ಸಂಸ್ಥೆ ಸ್ಥಾಪನೆ, ನಿಸರ್ಗ ಚಿಕಿತ್ಸೆ, ಯೋಗ ಕೇಂದ್ರ ಸ್ಥಾಪನೆ, ಶಾಖಾ ಮಠಗಳಿಗೆ ಪ.ಜಾತಿ ಮತ್ತು ಪಂಗಡಗಳ ಯುವಕರಿಗೆ ಧರ್ಮ ಸಂಸ್ಕಾರ ನೀಡಿ ಪಟ್ಟಾಭಿಷೇಕ ಮಾಡಿದ್ದು, ಮಹಿಳಾ ಸಾಧಕಿಯರಿಗೆ ಜಂಗಮ ದೀಕ್ಷೆ ನೀಡಿ ಮಠಾಧಿಕಾರಿಯನ್ನಾಗಿ ಮಾಡಿದ್ದು, ಮಠದ ನೂರಾರು ಎಕರೆ ಭೂಮಿಯನ್ನು ಆಯಾ ಗ್ರಾಮಗಳ ರೈತರಿಗೆ ಕೃಷಿ ಮಾಡಿ ಬದುಕಲು ನೀಡಿದ್ದು ಮುಂತಾದ ಹಲವು ಸಮಾಜಮುಖಿ ಕಾರ್ಯಗಳನ್ನು ಮಾಡಿದರು. ಪ್ರಮುಖವಾಗಿ ಡಾ. ಮಹಾಂತ ಶಿವಯೋಗಿ ಸ್ವಾಮೀಜಿಯವರು **'ವ್ಯಸನ ಮುಕ್ತ ಸಮಾಜ'** ನಿರ್ಮಾಣಕ್ಕೆ ೧೯೭೫ರಿಂದ ಕೈಗೊಂಡ ಮಹಾಂತ ಜೋಳಿಗೆ ಕಾರ್ಯಕ್ರಮ ಅತ್ಯಂತ ವಿಶಿಷ್ಟವಾದುದು, ಕುಡಿತದ ಚಟದಿಂದ ಪ.ಜಾತಿಯ ಯುವಕನೊಬ್ಬ ನಿಧನದ ಸುದ್ದಿ ಕೇಳಿ ಅವನ ಕೇರಿಗೆ ಸಾಂತ್ವನ ಹೇಳಲು ತೆರಳಿದ್ದ ಸ್ವಾಮಿಗಳಿಗೆ ಆತನ ಪತ್ನಿ ಮತ್ತು ಮಕ್ಕಳು ಉಪವಾಸದಿಂದ

ದು:ಖಿಸುವುದನ್ನು ಕಂಡರು. ಇಂತಹ ಸಾವಿರಾರು ಕುಟುಂಬಗಳ ಕುಡಿತ ಮತ್ತು ಇತರೇ ದುಶ್ಚಟಗಳಿಂದ ಹಾಳಾಗಿರುವುದನ್ನು ಅರಿತು, ಇಂತಹ ದುಶ್ಚಟಗಳಿಗೆ ಒಳಗಾಗಿರುವವನ್ನು ಮುಕ್ತಿಗೊಳಿಸುವ ಉದ್ದೇಶದಿಂದ ಮಹಾಂತ ಜೋಳಿಗೆ ಯೋಜನೆ ಆರಂಭಿಸಿದರು. ಬಟ್ಟೆಯ ಚೀಲದ ಜೋಳಿಗೆ ಹಿಡಿದು, ಕುಡಿತದ ಚಟದಿಂದ ನಿಧನನಾದ ಪ.ಜಾತಿಯ ಯುವಕನ ಕೇರಿಗೆ ಮೊದಲಿಗೆ ತೆರಳಿದ ಸ್ವಾಮೀಜಿಗಳು, ಅಲ್ಲಿನ ಗುಡಿಸಲು ಮನೆಗಳಿಗೆ ತೆರಳಿ ಮದ್ಯಪಾನ, ತಂಬಾಕು ಸೇರಿದಂತೆ ಎಲ್ಲಾ ರೀತಿಯ ದುಶ್ಚಟಗಳ ಬಗ್ಗೆ ಅಲ್ಲಿನ ಜನತೆಗೆ ಮನ ಮುಟ್ಟುವಂತೆ ತಿಳುವಳಿಕೆ ನೀಡಿ ಮನಪರಿವರ್ತನೆ ಮಾಡಿದರು.

ದುರ್ವಸನಿಗಳು ತಮ್ಮ ಎಲ್ಲಾ ದುಶ್ಚಟಗಳ ವಸ್ತುಗಳನ್ನು ಸ್ವಾಮೀಜಿ ಅವರ ಜೋಳಿಗೆಗೆ ಹಾಕಿ, ಇನ್ನೆಂದೂ ಅವುಗಳನ್ನು ಬಳಸುವುದಿಲ್ಲ ಎಂದು ಪ್ರಮಾಣ ಮಾಡಿದರು. ಜಾತಿ, ಮತ, ಪಂಗಡ, ಧರ್ಮ, ಭಾಷೆ, ದೇಶವೆನ್ನದೇ ಇಡೀ ೪೨ ವರ್ಷಗಳ ಕಾಲ ದೇಶದಲ್ಲಿ ಮಾತ್ರವಲ್ಲದೇ ಇಂಗ್ಲೆಂಡ್ ಸೇರಿದಂತೆ ವಿದೇಶದಲ್ಲೂ ತಮ್ಮ ಮಹಾಂತ ಜೋಳಿಗೆ ಹಿಡಿದು ಜನರಲ್ಲಿನ ದುಶ್ಚಟಗಳ ಭಿಕ್ಷೆ ಬೇಡಿದರು. ಮಹಾಂತ ಶಿವಯೋಗಿಗಳು ವ್ಯಸನ ಮುಕ್ತ ವ್ಯಕ್ತಿ, ಕುಟುಂಬ, ಸಮಾಜ, ಗ್ರಾಮಗಳ ನಿರ್ಮಾಣ ಮಾಡುವ ಜೊತೆಗೆ ತಮ್ಮ ಜೋಳಿಗೆ ಕಾರ್ಯಕ್ರಮದಲ್ಲಿ ನಾಡಿನ ಪ್ರಖ್ಯಾತ ವೈದ್ಯರು, ಸಮಾಜ ವಿಜ್ಞಾನಿಗಳು, ಸಾಹಿತಿಗಳು, ಸಮಾಜ ಕಳಕಳಿಯ ಕವಿಗಳು, ಧರ್ಮ ಗುರುಗಳನ್ನು ಆಹ್ವಾನಿಸಿ ಅವರಿಂದ ಉಪನ್ಯಾಸಗಳನ್ನು ಮಾಡಿಸುವ ಮೂಲಕ ವ್ಯಸನಗಳ ಮನಪರಿವರ್ತನೆ ಮಾಡುವುದುರ ಜೊತೆಗೆ ಮಕ್ಕಳು, ವಿದ್ಯಾರ್ಥಿಗಳು, ಯುವ ಜನಾಂಗ ಇಂತಹ ಚಟಗಳಿಗೆ ಬಲಿಯಾದಂತೆ ಅರಿವು ಮೂಡಿಸುತ್ತಿದ್ದರು. ಇದರಿಂದಾಗಿ ಲಕ್ಷಾಂತರ ಜನರು ವ್ಯಸನಗಳಿಂದ ಮುಕ್ತರಾಗಿ ಅವರ ಕುಟುಂಬಗಳು ನೆಮ್ಮದಿಯ ಜೀವನ ಸಾಗಿಸುತ್ತಿವೆ ಎನ್ನಲಾಗಿದೆ.



# ಅಭಿವೃದ್ಧಿ ಅಧ್ಯಯನ ವಿಭಾಗ

## ಕನ್ನಡ ವಿಶ್ವವಿದ್ಯಾಲಯ, ಹಂಪಿ.

ವಿದ್ಯಾರಣ್ಯ-೫೮೩೨೭೬

## ವ್ಯಸನ ಮುಕ್ತ ದಿನಾಚರಣೆಯ ಕಾರ್ಯಕ್ರಮ

ದಿನಾಂಕ: ೧.೦೮.೨೦೨೩

ಸ್ಥಳ: ಅಭಿವೃದ್ಧಿ ಅಧ್ಯಯನ ವಿಭಾಗದ ಸಭಾಂಗಣ.

**ಅಧ್ಯಕ್ಷತೆ ಮತ್ತು ಪ್ರಾಸ್ತವಿಕ**
ಡಾ.ಗೀತಮ್ಮ
ಮುಖ್ಯಸ್ಥರು, ಅಭಿವೃದ್ಧಿ ಅಧ್ಯಯನ ವಿಭಾಗ, ಕವಿಹಂ

**ಸಂಶೋಧನಾರ್ಥಿಗಳಿಂದ ಅಭಿಪ್ರಾಯ**
ಶಿವರಾಜ, ನಳಿನಿ, ಮಂಜಣ್ಣ, ಮಾಳಿಗಿ ತಿಮ್ಮಣ್ಣ

ಡಾ.ಶ್ರೀಧರ, ಪ್ರಾಧ್ಯಾಪಕರು
ಡಾ. ಎಚ್.ಡಿ.ಪ್ರಶಾಂತ, ಪ್ರಾಧ್ಯಾಪಕರು
ಡಾ.ಜನಾರ್ಧನ, ಪ್ರಾಧ್ಯಾಪಕರು
ಡಾ.ಗೋವರ್ಧನ, ಸಹಾಯಕ ಪ್ರಾಧ್ಯಾಪಕರು

ಕಾರ್ಯಕ್ರಮದ ನಿರೂಪಣೆ

ಸ್ವಾಗತ

ವಂದನಾರ್ಪಣೆ